ಅಧ್ಯಕ್ಷರು ಜಿಲ್ಲಾ ಮಟ್ಟದ ವಾಹನ ಚಾಲಕರ ನೇಮಕಾತಿ ಸಮಿತಿ
ಹಾಗೂ ಜಿಲ್ಲಾಧಿಕಾರಿಗಳ ಕಚೇರಿ, ಧಾರವಾಡ ಜಿಲ್ಲೆ.

---

ನಂ.ಆಡಳಿತ/ಸಿಬ್ಬಂದಿ/ವಹಿ/36/2015-16

ದಿನಾಂಕ :12-01-2018

## ಅಧಿಸೂಚನೆ

ವಿಷಯ:- **ಧಾರವಾಡ** ಜಿಲ್ಲೆಯ ಅಬಕಾರಿ ಉಪ ಆಯುಕ್ತರ ಕಛೇರಿ ಅಧೀನದಲ್ಲಿ ಖಾಲಿ ಇರುವ ವಾಹನ ಚಾಲಕರ ಹುದ್ದೆಗಳನ್ನು ನೇರ ನೇಮಕಾತಿ ಮೂಲಕ ಭರ್ತಿ ಮಾಡುವ ಬಗ್ಗೆ.

ಉಲ್ಲೇಖ:- 1) ಸರ್ಕಾರದ ಪತ್ರ ಸಂಖ್ಯೆ ಆಇ/107/ಇಪಿಎಸ್/2014 ದಿ: 27-10-2014
2) ಸರ್ಕಾರದ ಆದೇಶ ಸಂಖ್ಯೆ ಎಫ್‌ಡಿ/31/ಇಪಿಎಸ್/99 ದಿ: 3-6-1999.
3) ಅಬಕಾರಿ ಆಯುಕ್ತರು, ಕರ್ನಾಟಕ ರಾಜ್ಯ, ಬೆಂಗಳೂರುರವರ ಪತ್ರ ಸಂಖ್ಯೆ ಇಸಿಇ/11/ವಾಚಾ/ಎಪಿಟಿ/2013 ದಿನಾಂಕ 22-12-2015.

* * *

ಕರ್ನಾಟಕ ಸರ್ಕಾರದ ಉಲ್ಲೇಖ(1)ರಲ್ಲಿನ ಆದೇಶದ ಮೇರೆಗೆ ಅಬಕಾರಿ ಇಲಾಖೆಯಲ್ಲಿ ಖಾಲಿ ಇರುವ ವಾಹನ ಚಾಲಕರ ಹುದ್ದೆಗಳನ್ನು ನೇರ ನೇಮಕಾತಿ ಮೂಲಕ ತುಂಬುವ ಬಗ್ಗೆ ಉಲ್ಲೇಖ(3)ರಲ್ಲಿನ ಅಬಕಾರಿ ಆಯುಕ್ತರವರ ಪತ್ರದಲ್ಲಿ ಧಾರವಾಡ ಜಿಲ್ಲೆಗೆ ಹಂಚಿಕೆ ಮಾಡಿರುವ 02 ವಾಹನ ಚಾಲಕರ ಹುದ್ದೆಗಳ ಪೈಕಿ 01 ವಾಹನ ಚಾಲಕರ ಹುದ್ದೆಯನ್ನು ಭರ್ತಿ ಮಾಡಿದ್ದು ಉಳಿದ 01 ವಾಹನ ಚಾಲಕರ ಹುದ್ದೆಯನ್ನು ನೇರ ನೇಮಕಾತಿ ಮೂಲಕ ಭರ್ತಿ ಮಾಡಬೇಕಾಗಿದ್ದರಿಂದ ಸರ್ಕಾರದ ಅಧಿಸೂಚನೆಗಳನ್ವಯ ಹಾಗೂ ಇಲಾಖಾ ವೃಂದ ಮತ್ತು ನೇಮಕಾತಿ ನಿಯಮಗಳು, ಪ್ರಚಲಿತ ಸರ್ಕಾರಿ ನಿಯಮಗಳು, ಕ.ನಾ.ಸೇ (ಸ್ಪರ್ಧಾತ್ಮಕ ಪರೀಕ್ಷೆಗಳ ಮೂಲಕ ನೇರ ನೇಮಕಾತಿ ಮತ್ತು ಆಯ್ಕೆ) (ಸಾಮಾನ್ಯ) ನಿಯಮಗಳು 2006 ರಂತೆ ಭರ್ತಿ ಮಾಡಲು ಅರ್ಹ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

1) **ಹುದ್ದೆಗಳ ವಿವರ ಮತ್ತು ವೇತನ ಶ್ರೇಣಿ**

ಅ) ವಾಹನ ಚಾಲಕ : 1

ಅ) ವೇತನ ಶ್ರೇಣಿ : ರೂ.11600-200-12000-250-13000-300-14200-350-15600-400-17200-450-19000-500-21000.

2) **ಹುದ್ದೆಗಳ ವರ್ಗೀಕರಣ**

| ವರ್ಗಗಳು | ಇತರೆ | ಮ.ಅ | ಗ್ರಾ.ಅ | ಮಾ.ಸೈ | ಕ.ಮಾ.ಅ | ಯೋ.ಅ | ಅಂ.ವಿ | ಒಟ್ಟು |
|---|---|---|---|---|---|---|---|---|
| ಅ)ಪ.ಜಾ | - | - | - | - | - | - | - | - |
| ಆ)ಪ.ಪಂ | - | - | - | - | - | - | - | - |
| ಇ)ಪ್ರ-1 | - | - | - | - | - | - | - | - |
| ಈ)ಪ್ರ-2(ಎ) | - | - | - | - | - | - | - | - |
| ಉ)ಪ್ರ-2(ಬಿ) | - | - | - | - | - | - | - | - |
| ಊ)ಪ್ರ-3(ಎ) | - | - | - | - | - | - | - | - |
| ಋ)ಪ್ರ-3(ಬಿ) | - | - | - | - | - | - | - | - |
| ಋ)ಸಾ.ಅ | 01 | - | - | - | - | - | - | 01 |

(ಹುದ್ದೆಗಳ ವರ್ಗೀಕರಣದ ರೋಸ್ಟರಿನ ಪ್ರಾರಂಭಿಕ ಬಿಂದು 30)

* ಕರ್ನಾಟಕ ನಾಗರಿಕ ಸೇವಾ (ಸಾಮಾನ್ಯ ನೇಮಕಾತಿ) ನಿಯಮಗಳು 1977 ರ ನಿಯಮ 9-ಬಿ ಪ್ರಕಾರ ಮಹಿಳಾ ಅಭ್ಯರ್ಥಿ ಲಭ್ಯವಾಗದಿರುವದರಿಂದ ಅದೇ ಪ್ರವರ್ಗದ ಇತರೆ ಪುರುಷ ಅಭ್ಯರ್ಥಿಗಳಿಂದ ಭರ್ತಿ ಮಾಡಲಾಗುತ್ತಿದೆ.

3) ವಿದ್ಯಾರ್ಹತೆ:

ಅ) 7ನೇ ತರಗತಿಯಲ್ಲಿ ಉತ್ತೀರ್ಣರಾಗಿರಬೇಕು.

ಆ) ಚಾಲ್ತಿಯಲ್ಲಿರುವ ಲಘು ವಾಹನ (LMV) ಚಾಲನಾ ಪರವಾನಿಗೆಯನ್ನು (Driving Licence) ಮತ್ತು ಪ್ರಥಮ ಚಿಕಿತ್ಸಾ ಪ್ರಮಾಣ ಪತ್ರವನ್ನು ಹೊಂದಿರಬೇಕು.

4) **ಪಿಂಚಣಿ ಸೌಲಭ್ಯ** : ಸರ್ಕಾರದ ಆದೇಶ ಸಂಖ್ಯೆ:ಎಫ್‌ಡಿ/(ಎಸ್‌ಪಿಎಲ್)/04/ ಪಿಇಟಿ /2005, ದಿನಾಂಕ:31-03-2006 ರಂತೆ

5) **ದೈಹಿಕ ಸಾಮರ್ಥ್ಯ**: ಅಭ್ಯರ್ಥಿಗಳು ಈ ಕೆಳಗಿನ ದೇಹದಾರ್ಢ್ಯತೆಯನ್ನು ಹೊಂದಿರತಕ್ಕದ್ದು.

| ಕ್ರ. ಸಂ. | ಪುರುಷರಿಗೆ |
|---|---|
| 01 | ಎತ್ತರ-163 ಸೆಂ.ಮೀ |
| 02 | ಎದೆಯ ಸುತ್ತಳತೆ-ಕನಿಷ್ಠ-81 ಸೆಂ.ಮೀ, ಪೂರ್ಣ ಉಸಿರು ಎಳೆದಾಗ ಕನಿಷ್ಠ 5 ಸೆಂ. ಮೀ ಹೆಚ್ಚಳವಾಗಬೇಕು. |
| 03 | ದೃಷ್ಟಿ ಸಾಮರ್ಥ್ಯ-6/9 ಅಥವಾ 6/12 |

6) **ವಯೋಮಿತಿ:**

ಅರ್ಜಿ ಸಲ್ಲಿಸಲು ಕೊನೆಯ ದಿನಾಂಕದಂದು ಈ ಕೆಳಗಿನಂತೆ ವಯೋಮಿತಿ ಹೊಂದಿರತಕ್ಕದ್ದು

ಅ) ಸಾಮಾನ್ಯ ವರ್ಗ : ಕನಿಷ್ಠ 18 ವರ್ಷ ಗರಿಷ್ಠ 35 ವರ್ಷ

7) ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ: **12-02-2018**

8) **ಅರ್ಜಿ ಶುಲ್ಕ:**

ಅಭ್ಯರ್ಥಿಗಳು 50/-ರೂ ಅರ್ಜಿ ಶುಲ್ಕವನ್ನು ಡಿಡಿ ರೂಪದಲ್ಲಿ ಸಲ್ಲಿಸುವುದು, ಡಿಡಿಯನ್ನು ಅಬಕಾರಿ ಉಪ ಆಯುಕ್ತರು, ಧಾರವಾಡ ಜಿಲ್ಲೆ ಇವರ ಹೆಸರಿನಲ್ಲಿ ಪಡೆಯತಕ್ಕದ್ದು. ಡಿಡಿಯು ಅರ್ಜಿ ಸಲ್ಲಿಸುವ ದಿನಾಂಕದ ಪೂರ್ವದ 15 ದಿನಗಳಿಂದ ಈಚೆಗೆ ಪಡೆದಿರತಕ್ಕದ್ದು.

9) **ಅರ್ಜಿ ನಮೂನೆ :**

ಅರ್ಜಿ ನಮೂನೆಯನ್ನು ಅಬಕಾರಿ ಉಪ ಆಯುಕ್ತರ ಕಛೇರಿ, ಧಾರವಾಡ ಜಿಲ್ಲೆ, ನವನಗರ-580025 ರವರ ಕಚೇರಿಯಿಂದ ಅಥವಾ www.dharwad.nic.in/kn/recruitments.aspx website ನಿಂದ ಪಡೆದು ದಿನಾಂಕ:12-02-2018 ರ ಸಾಯಂಕಾಲ-4-00 ಗಂಟೆಯೊಳಗಾಗಿ ಖುದ್ದಾಗಿ ಅಥವಾ ಸದರಿ ದಿನಾಂಕದೊಳಗಾಗಿ ಈ ಕಚೇರಿಗೆ ಸ್ವೀಕೃತವಾಗುವಂತೆ ಸಾಮಾನ್ಯ ಅಂಚೆಯ ಮೂಲಕ ಮೇಲ್ಕಂಡ ವಿಳಾಸಕ್ಕೆ ಸಲ್ಲಿಸುವುದು. ನಿಗದಿತ ದಿನಾಂಕ ಹಾಗೂ ಸಮಯದ ನಂತರ ಸ್ವೀಕೃತವಾಗುವ ಅರ್ಜಿಗಳನ್ನು ಪರಿಗಣಿಸಲಾಗುವದಿಲ್ಲ.

10) ಭರ್ತಿ ಮಾಡಲಾದ ಅರ್ಜಿಯಲ್ಲಿನ ಮಾಹಿತಿ/ದಾಖಲಾತಿಗಳ ಮೇಲೆ ತಾತ್ಕಾಲಿಕ ಆಯ್ಕೆ ಪಟ್ಟಿಯನ್ನು ಪ್ರಕಟಿಸಲಾದ ನಂತರದಲ್ಲಿ ಈ ಕೆಳಕಂಡ ಮೂಲ ದಾಖಲಾತಿಗಳನ್ನು ಪರಿಶೀಲನೆಗಾಗಿ ಹಾಜರು ಪಡಿಸತಕ್ಕದ್ದು.

a) ಹುದ್ದೆಗೆ ನಿಗದಿಪಡಿಸಲಾದ 7 ನೇ ತರಗತಿಯ ಮೂಲ ಅಂಕಪಟ್ಟಿ/ಇತ್ತೀಚಿಗಿನ ನಡತೆ ಪ್ರಮಾಣ ಪತ್ರ.

b) ಚಾಲ್ತಿಯಲ್ಲಿರುವ ಲಘು ಮೋಟಾರು ವಾಹನ ಚಾಲನಾ ಪರವಾನಿಗೆ

c) ನಿಗದಿತ ದೇಹದಾರ್ಢ್ಯತೆ ಹೊಂದಿರುವ ಬಗ್ಗೆ ಜಿಲ್ಲಾ ಶಸ್ತ್ರ ಚಿಕಿತ್ಸಕರು ನೀಡಿದ ಮೂಲ ವೈದ್ಯಕೀಯ ಪ್ರಮಾಣ ಪತ್ರ.

d) ಜನ್ಮ ದಿನಾಂಕವನ್ನು ನಮೂದಿಸಿರುವ ಶಾಲಾ ವರ್ಗಾವಣೆ ಪ್ರಮಾಣ ಪತ್ರ

11) ಆಯ್ಕೆ ವಿಧಾನ:

ಅ) ಅಭ್ಯರ್ಥಿಗಳ ಆಯ್ಕೆಯನ್ನು ರಾಜ್ಯ ಅಬಕಾರಿ ಇಲಾಖೆಯ ವೃಂದ ಮತ್ತು ನೇಮಕಾತಿ ನಿಯಮಗಳಾನುಸಾರ, ಕರ್ನಾಟಕ ನಾಗರಿಕ ಸೇವಾ( ಸಾಮಾನ್ಯ ನೇಮಕಾತಿ)ನಿಯಮಗಳು 1977 ಹಾಗೂ ಕರ್ನಾಟಕ ನಾಗರಿಕ ಸೇವಾ (ಸ್ಪರ್ಧಾತ್ಮಕ ಪರೀಕ್ಷೆಗಳ ಮೂಲಕ ನೇರ ನೇಮಕಾತಿ ಮತ್ತು ಆಯ್ಕೆ) (ಸಾಮಾನ್ಯ) ನಿಯಮಗಳು 2006 ರಂತೆ

ಬ) ನೇಮಕಾತಿ ಪ್ರಕ್ರಿಯೆಯು ಸರ್ಕಾರದಿಂದ ಕಾಲಕಾಲಕ್ಕೆ ಹೊರಡಿಸುವ ನಿಯಮಗಳಿಗೆ ಒಳಪಟ್ಟಿರುತ್ತದೆ. ಮೇಲ್ಕಾಣಿಸಿದ ಹುದ್ದೆಗಳಿಗೆ ಮೊದಲು 1:5 ರ ಪ್ರಮಾಣದಲ್ಲಿ ಅಭ್ಯರ್ಥಿಗಳ ದಾಖಲಾತಿ ಪರಿಶೀಲನೆ ಕರೆದು ದಾಖಲಾತಿಗಳ ಪರಿಶೀಲನೆ ನಂತರದಲ್ಲಿ 7 ನೇ ತರಗತಿಯ ಅಂಕಗಳ ಆಧಾರದ ಮೇಲೆ ಆಯ್ದ ಅಭ್ಯರ್ಥಿಗಳ ತಾತ್ಕಾಲಿಕ ಪಟ್ಟಿಯನ್ನು ಪ್ರಕಟಿಸಿ, ಆಯ್ದ ಅಭ್ಯರ್ಥಿಗಳನ್ನು ಪೋಲಿಸ್ ತರಬೇತಿ ಮತ್ತು ನಿರ್ವಹಣಾ ಶಾಲೆಗೆ ಡ್ರೈವಿಂಗ್ ನೈಪುಣ್ಯತೆ ಮತ್ತು ದೈಹಿಕ ಸಾಮರ್ಥ್ಯ ಪರೀಕ್ಷೆಗಾಗಿ ನಿಯೋಜಿಸಲಾಗುವುದು. ಅಭ್ಯರ್ಥಿಯ ವಾಹನ ಚಾಲನೆಯನ್ನು ಪರೀಕ್ಷಿಸಿದ ನಂತರ ಅಭ್ಯರ್ಥಿಗಳು ಉತ್ತೀರ್ಣತೆಯ ಪ್ರಮಾಣ ಪತ್ರ ಪಡೆದು ಸಲ್ಲಿಸತಕ್ಕದ್ದು. ಸದರಿ ಪ್ರಮಾಣ ಪತ್ರವನ್ನು ಪಡೆದು ಸಲ್ಲಿಸಿದ ನಂತರದಲ್ಲಿಯೇ ಅಂತಿಮ ನೇಮಕಾತಿ ಪಟ್ಟಿ ಪ್ರಕಟಿಸಲಾಗುವುದು. ಒಂದು ವೇಳೆ ಅರ್ಹ ಅಭ್ಯರ್ಥಿಗಳು ಲಭ್ಯವಾಗದಿದ್ದಲ್ಲಿ ಹೆಚ್ಚುವರಿ ಆಯ್ಕೆ ಪಟ್ಟಿಯಲ್ಲಿನ ಅಭ್ಯರ್ಥಿಗಳನ್ನು ಪರಿಗಣಿಸಲಾಗುವುದು.

12) ಅರ್ಹತಾ ಷರತ್ತುಗಳು:

a) ಅಭ್ಯರ್ಥಿಯು ಭಾರತೀಯ ನಾಗರಿಕನಾಗಿರತಕ್ಕದ್ದು.
b) ಅಭ್ಯರ್ಥಿಯು ಮಾನಸಿಕವಾಗಿ ಮತ್ತು ದೈಹಿಕವಾಗಿ ಆರೋಗ್ಯವಂತನಾಗಿರಬೇಕು ಮತ್ತು ಅವರ ನೇಮಕಾತಿಯು ಕರ್ತವ್ಯಗಳ ದಕ್ಷ ನಿರ್ವಹಣೆಗೆ ಆಂತಕವನ್ನುಂಟು ಮಾಡುವ ಸಂಭವ ಇರುವ ಯಾವುದೇ ದೈಹಿಕ ನ್ಯೂನ್ಯತೆಯಿಂದ ಮುಕ್ತರಾಗಿರಬೇಕು.
c) ದೈಹಿಕವಾಗಿ ಅನರ್ಹರಾಗಿದ್ದಾರೆಂಬುದಾಗಿ ವೈದ್ಯಕೀಯ ಮಂಡಳಿಯ ವರದಿಯ ಮೇಲೆ ಅನರ್ಹರೆಂಬುದಾಗಿ ತಿರಸ್ಕರಿಸುವ ಪೂರ್ಣ ವಿವೇಚನೆಯನ್ನು ರಾಜ್ಯ ಸರ್ಕಾರವು ಕಾಯ್ದಿರಿಸಿಕೊಂಡಿದೆ.
d) ನಿಗದಿತ ಶೈಕ್ಷಣಿಕ ಅರ್ಹತೆಯ ಜೊತೆಗೆ ಈ ಮೇಲ್ಕಂಡ ಅರ್ಹತೆಗಳನ್ನು ಹೊಂದಿರುವ ಅಭ್ಯರ್ಥಿಗಳು ನೇರ ನೇಮಕಾತಿಗಾಗಿ ಅರ್ಜಿ ಸಲ್ಲಿಸಲು ಅರ್ಹತೆಯನ್ನು ಹೊಂದಿರುತ್ತಾರೆ.

13) ವಿಶೇಷ ಸೂಚನೆಗಳು;

a) ಅಭ್ಯರ್ಥಿಗಳು ಅರ್ಜಿಯನ್ನು ಭರ್ತಿ ಮಾಡುವ ಮುನ್ನ ಲಗತ್ತಿಸಿರುವ ಸೂಚನೆಗಳನ್ನು ತಪ್ಪದೇ ಗಮನಿಸತಕ್ಕದ್ದು.
b) ಅಭ್ಯರ್ಥಿಗಳಿಗೆ ಕನ್ನಡ ಭಾಷಾ ಜ್ಞಾನದ ಅವಶ್ಯಕತೆ ಕಡ್ಡಾಯವಾಗಿರುತ್ತದೆ.
c) ಅಪೂರ್ಣವಾದ ಅರ್ಜಿಗಳನ್ನು ತಿರಸ್ಕರಿಸಲಾಗುವುದು.
d) ಉದ್ಯೋಗ ವಿನಿಮಯ ಕೇಂದ್ರದಲ್ಲಿ ಹೆಸರನ್ನು ನೊಂದಾಯಿಸಿದ ಅರ್ಹ ಅಭ್ಯರ್ಥಿಗಳು ಸಹ ಈ ಅಧಿಸೂಚನೆ ಪ್ರಕಾರ ಅರ್ಜಿ ಸಲ್ಲಿಸಬಹುದಾಗಿದೆ,
e) ಅಭ್ಯರ್ಥಿಗಳು ಅವರ ಆಯ್ಕೆಯ ಬಗ್ಗೆ ಶಿಫಾರಸುಗಳನ್ನು ಮಾಡಿದಲ್ಲಿ ಅಂತಹವರ ಅರ್ಜಿಗಳನ್ನು ತಿರಸ್ಕರಿಸಲಾಗುವುದು,
f) ಪ್ರಕಟಿಸಿರುವ ಹುದ್ದೆಗಳನ್ನು ಹೆಚ್ಚು ಅಥವಾ ಕಡಿಮೆ ಮಾಡುವ ಹಕ್ಕು ಆಯ್ಕೆ ಪ್ರಾಧಿಕಾರಿಗಳಿಗೆ ದತ್ತವಾಗಿರುತ್ತದೆ,
g) ಆಯ್ಕೆ ಪ್ರಾಧಿಕಾರವು ವಾಹನ ಚಾಲಕರ ಹುದ್ದೆಗಳನ್ನು ಭರ್ತಿ ಮಾಡುವ ಪೂರ್ಣ ಅಧಿಕಾರವನ್ನು ಕಾಯ್ದಿರಿಸಿಕೊಂಡಿದೆ.
h) ಸರ್ಕಾರಿ ಇಲಾಖೆಯಲ್ಲಿ ಸೇವೆ ಸಲ್ಲಿಸುತ್ತಿರುವ ಅಭ್ಯರ್ಥಿಗಳು ಸಕ್ಷಮ ಪ್ರಾಧಿಕಾರದಿಂದ ಅರ್ಜಿ ಸಲ್ಲಿಸುವ ಪೂರ್ವದಲ್ಲಿ ಪೂರ್ವಾನುಮತಿ ಪಡೆದಿರಬೇಕು.
i) ಯಾವುದೇ ರೀತಿಯ ಪತ್ರ ವ್ಯವಹಾರಗಳಿಗೆ ಅವಕಾಶವಿರುವದಿಲ್ಲ.

j) ಅರ್ಜಿ ಸಲ್ಲಿಸುವ ಲಕೋಟೆಯ ಮೇಲೆ "ಅಬಕಾರಿ ಇಲಾಖೆಯ ವಾಹನ ಚಾಲಕರ ಹುದ್ದೆಯ ನೇಮಕಾತಿಗೆ ಅರ್ಜಿ" ಎಂದು ಸ್ಪಷ್ಟವಾಗಿ ದಪ್ಪ ಅಕ್ಷರಗಳಲ್ಲಿ ನಮೂದಿಸತಕ್ಕದ್ದು.

k) ಅಭ್ಯರ್ಥಿಗಳು ತಮ್ಮ ಮಾಹಿತಿಗಾಗಿ ಭರ್ತಿ ಮಾಡಿ ಸಲ್ಲಿಸಿದ ಅರ್ಜಿಯ ಒಂದು ಫೋಟೋ ಪ್ರತಿಯನ್ನು ತಮ್ಮೊಂದಿಗೆ ಇಟ್ಟುಕೊಳ್ಳುವುದು.

l) ಅರ್ಜಿಯನ್ನು ಸ್ವೀಕರಿಸಲು ನಿಗದಿಪಡಿಸಿದ ಕೊನೆಯ ದಿನಾಂಕವು ಸಾರ್ವತ್ರಿಕ ರಜಾ ದಿನವಾಗಿ ಘೋಷಿಸಲ್ಪಟ್ಟರೆ, ನಂತರದ ಕಚೇರಿ ಕೆಲಸದ ದಿನದಂದು ಅರ್ಜಿಗಳನ್ನು ಸಲ್ಲಿಸಲು ಕೊನೆಯ ದಿನಾಂಕವಾಗಿರುತ್ತದೆ.

m) ಅಧಿಸೂಚನೆಯಲ್ಲಿ ಪ್ರಕಟಿಸಿರುವ ಎಲ್ಲಾ ಪ್ರಮಾಣ ಪತ್ರಗಳನ್ನು ಅರ್ಜಿ ಸಲ್ಲಿಸಲು ನಿಗದಿಪಡಿಸಿರುವ ಕೊನೆಯ ದಿನಾಂಕಗಳೊಳಗೆ ಕಡ್ಡಾಯವಾಗಿ ಪಡೆದುಕೊಂಡು ಅರ್ಹತೆಯನ್ನು ಹೊಂದಿರಬೇಕು.

n) ನೈತಿಕ ದುರ್ನಡತೆಯಿಂದಾಗಿ/ನೀತಿ ಬಾಹಿರ ಚಟುವಟಿಕೆಗಳಿಂದಾಗಿ ನ್ಯಾಯಾಲಯದಿಂದ ಶಿಕ್ಷೆಗೊಳಪಟ್ಟಿರುವ ವ್ಯಕ್ತಿ ಅಥವಾ ಈ ಇಲಾಖೆಯಲ್ಲಿ ಅಥವಾ ರಾಜ್ಯ/ಕೇಂದ್ರ/ಸ್ಥಳೀಯ ಸಂಸ್ಥೆ/ಕೈಗಾರಿಕಾ/ವಾಣಿಜ್ಯಕ್ಕೆ ಸಂಬಂಧಪಟ್ಟ ಅಥವಾ ಇತರೆ ಕಛೇರಿಗಳಿಗೆ ನೈತಿಕ ದುರ್ನಡತೆಯಿಂದಾಗಿ/ನೀತಿ ಬಾಹಿರ ಚಟುವಟಿಕೆಗಳಲ್ಲಿ ಭಾಗಿಯಾಗಿ ಅಥವಾ ಆಯ್ಕೆಯಾದ ಅಭ್ಯರ್ಥಿಯ ಬದಲಿಯಾಗಿ ಕಾರ್ಯ ನಿರ್ವಹಿಸುತ್ತಿದ್ದ ಸಂದರ್ಭದಲ್ಲಿನ ಕಾನೂನು ಬಾಹಿರ/ನೀತಿ ಬಾಹಿರ ಚಟುವಟಿಕೆಗಳಲ್ಲಿ ತೊಡಗಿ ಸೇವೆಯಿಂದ ತೆಗೆದು ಹಾಕಿದಲ್ಲಿ/ವಜಾ ಮಾಡಲ್ಪಟ್ಟಿದ್ದಲ್ಲಿ ಅಂತಹ ಅಭ್ಯರ್ಥಿಗಳು ಅರ್ಜಿ ಅಲ್ಲಿಸಲು ಅನರ್ಹರಾಗಿರುತ್ತಾರೆ/ಅರ್ಜಿ ಸಲ್ಲಿಸಿದಲ್ಲಿ ಅವುಗಳನ್ನು ತಿರಸ್ಕರಿಸಲಾಗುವುದು.

ಅಧ್ಯಕ್ಷರು ಜಿಲ್ಲಾ ಮಟ್ಟದ ವಾಹನ ಚಾಲಕರ
ನೇಮಕಾತಿ ಸಮಿತಿ ಹಾಗೂ
ಜಿಲ್ಲಾಧಿಕಾರಿಗಳು, ಧಾರವಾಡ ಜಿಲ್ಲೆ.

ಪ್ರತಿಯನ್ನು:-

ವಾರ್ತಾ ಮತ್ತು ಪ್ರಚಾರ ಅಧಿಕಾರಿಗಳು, ವಾರ್ತಾ ಮತ್ತು ಪ್ರಚಾರ ಇಲಾಖೆ ಧಾರವಾಡ ಇವರಿಗೆ ಕಳುಹಿಸುತ್ತಾ, ಮೇಲ್ಕಂಡ ಅಧಿಸೂಚನೆಯನ್ನು ನಿಗದಿತ ದಿನಾಂಕದೊಳಗಾಗಿ ರಾಜ್ಯ ಮತ್ತು ಜಿಲ್ಲಾ ಮಟ್ಟದ ಕನ್ನಡ ದಿನಪತ್ರಿಕೆಗಳಲ್ಲಿ ಸಿದ್ಧ ರೂಪದಲ್ಲಿ ಸರ್ಕಾರಕ್ಕೆ ಯಾವುದೇ ವೆಚ್ಚ ಬಾರದ ರೀತಿಯಲ್ಲಿ ಪ್ರಕಟಿಸಲು ಕೋರಿದೆ.

1) ಮಾನ್ಯ ಅಬಕಾರಿ ಆಯುಕ್ತರು, ಕರ್ನಾಟಕ ರಾಜ್ಯ ಬೆಂಗಳೂರು ರವರಿಗೆ ಮಾಹಿತಿಗಾಗಿ ಸಲ್ಲಿಸಿದೆ.
2) ಜಿಲ್ಲಾಧಿಕಾರಿಗಳು ಧಾರವಾಡ ಜಿಲ್ಲೆರವರಿಗೆ ಅವಗಾಹನೆಗಾಗಿ ಸಲ್ಲಿಸಿದೆ.
3) ಪ್ರಾದೇಶಿಕ ಆಯುಕ್ತರು, ಬೆಳಗಾವಿ ವಿಭಾಗ, ಬೆಳಗಾವಿ ರವರ ಅವಗಾಹನೆಗಾಗಿ ಸಲ್ಲಿಸಿದೆ.
4) ರಾಜ್ಯದ ಎಲ್ಲಾ ಜಿಲ್ಲಾಧಿಕಾರಿಗಳಿಗೆ ತಮ್ಮ ಕಚೇರಿಯ ಸೂಚನಾ ಫಲಕದಲ್ಲಿ ಪ್ರಕಟಿಸಲು ಕೋರಿದೆ.
5) ಎಲ್ಲಾ ಜಿಲ್ಲೆಯ ಅಬಕಾರಿ ಉಪ ಆಯುಕ್ತರುಗಳಿಗೆ ತಮ್ಮ ಕಚೇರಿಯ ಫಲಕದಲ್ಲಿ ಪ್ರಕಟಿಸಲು ಕೋರಿದೆ.
6) ಜಿಲ್ಲಾ ಉದ್ಯೋಗ ವಿನಿಮಯ ಅಧಿಕಾರಿ, ಧಾರವಾಡ ಇವರಿಗೆ ತಮ್ಮ ಕಚೇರಿಯ ಸೂಚನಾ ಫಲಕದಲ್ಲಿ ಪ್ರಕಟಿಸಲು ಕೋರಿದೆ.
7) ಪ್ರಾಶುಂಪಾಲರು, ಜಿಲ್ಲಾ ತರಬೇತಿ ಸಂಸ್ಥೆ ಧಾರವಾಡ ಇವರಿಗೆ ತಮ್ಮ ಕಚೇರಿಯ ಸೂಚನಾ ಫಲಕದಲ್ಲಿ ಪ್ರಕಟಿಸಲು ಕೋರಿದೆ.
8) ಜಿಲ್ಲಾ ಸಮಾಜ ಕಲ್ಯಾಣ ಅಧಿಕಾರಿಗಳು, ಧಾರವಾಡ ಜಿಲ್ಲೆ ಇವರಿಗೆ ತಮ್ಮ ಕಚೇರಿಯ ಸೂಚನಾ ಫಲಕದಲ್ಲಿ ಪ್ರಕಟಿಸಲು ಕೋರಿದೆ.
9) ಜಿಲ್ಲಾ ಅಧಿಕಾರಿಗಳು, ಹಿಂದುಳಿದ ವರ್ಗಗಳ ಮತ್ತು ಅಲ್ಪ ಸಂಖ್ಯಾತರ ಕಲ್ಯಾಣ ಇಲಾಖೆ, ಧಾರವಾಡ ಇವರಿಗೆ ತಮ್ಮ ಕಚೇರಿಯ ಸೂಚನಾ ಫಲಕದಲ್ಲಿ ಪ್ರಕಟಿಸಲು ಕೋರಿದೆ.
10) ಉಪ ನಿರ್ದೇಶಕರು , ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಧಾರವಾಡ ಇವರಿಗೆ ತಮ್ಮ ಕಚೇರಿಯ ಸೂಚನಾ ಫಲಕದಲ್ಲಿ ಪ್ರಕಟಿಸಲು ಕೋರಿದೆ.
11) ಉಪ ವಿಭಾಗಧಿಕಾರಿಗಳು, ಧಾರವಾಡ ಉಪ ವಿಭಾಗ ಇವರಿಗೆ ಕಳುಹಿಸುತ್ತಾ ನಿಮ್ಮ ಕಚೇರಿಯ ಸೂಚನಾ ಫಲಕದಲ್ಲಿ ಪ್ರಕಟಿಸಲು ಕೋರಿದೆ.
12) ಜಿಲ್ಲೆಯ ಎಲ್ಲಾ ತಹಸೀಲ್ದಾರ ರವರಿಗೆ ಕಳುಹಿಸುತ್ತಾ ನಿಮ್ಮ ಕಚೇರಿಯ ಸೂಚನಾ ಫಲಕದಲ್ಲಿ ಪ್ರಕಟಿಸಲು ಕೋರಿದೆ.
13) ಈ ಕಾರ್ಯಾಲಯದ ಸೂಚನಾ ಫಲಕಕ್ಕೆ,
14) ಹೆಚ್ಚುವರಿ ಪ್ರತಿಗಳು ಶಾಖಾ ಕಡತಕ್ಕೆ.